# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1079(965)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ವಿಜಯಪುರದಲ್ಲಿ ಆರೋಗ್ಯ ಇಲಾಖೆಯ ಅಪರ ನಿರ್ದೇಶಕರ ಕಛೇರಿ ಸ್ಥಾಪಿಸುವ ಕುರಿತು

(ಅ) ವಿಜಯಪುರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ಕಛೇರಿಯನ್ನು ಸ್ಥಾಪಿಸಲಾಗಿದೆಯೇ ; ಸ್ಥಾಪಿಸಿದ್ದರೆ, ಸದರಿ ಕಛೇರಿಯು ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗಮನಕ್ಕೆ ಬಂದಿದ್ದರೆ, ಪೂರ್ಣ ಸಿಬ್ಬಂದಿಯೊಂದಿಗೆ ಕಾರ್ಯಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಸದರಿ ಕಛೇರಿಯಲ್ಲಿ ಕೆಲಸ ನಿರ್ವಹಿಸಲು ಅಗತ್ಯವಿರುವ ಅಧಿಕಾರಿ/ಸಿಬ್ಬಂದಿಗಳನ್ನು ಇದುವರೆಗೆ ನೇಮಕಾತಿ ಮಾಡಿಕೊಳ್ಳಲು ಅಥವಾ ಬೇರೆ ಕಛೇರಿಗಳಿಂದ ಸ್ಥಳಾಂತರಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸದರಿ ಕಛೇರಿಗೆ ಅಗತ್ಯವಿರುವ ಅಧಿಕಾರಿ/ಸಿಬ್ಬಂದಿಯನ್ನು ಸ್ಥಳಾಂತರಿಸದಿರಲು ಕಾರಣವೇನು; ಸ್ಥಳಾಂತರಿಸಲು ಸರ್ಕಾರದ ಆದೇಶವಿದ್ದರೂ ಕೂಡ ಕ್ರಮ ಕೈಗೊಳ್ಳದಿರುವ ಅಧಿಕಾರಿಯ ಹೆಸರು ಮತ್ತು ಪದನಾಮ ಸಹಿತ ಮಾಹಿತಿ ಒದಗಿಸುವುದು?